# ವಸತಿ ಭಾಗ್ಯ





## ಮೂರು ಲಕ್ಷ ಮನೆ

### ಗುರಿ ಮೀರಿದ ಸಾಧನೆ

ರಾಜ್ಯವನ್ನು ಗುಡಿಸಲು ಮುಕ್ತವನ್ನಾಗಿಸಲು ಸರ್ಕಾರ ಸಂಕಲ್ಪಿಸಿದ್ದು, ಮುಂದಿನ ಐದು ವರ್ಷಗಳ ಅವಧಿಯಲ್ಲಿ 12 ಲಕ್ಷಕ್ಕೂ ಹೆಚ್ಚು ಮನೆಗಳ ನಿರ್ಮಾಣ ಗುರಿ ಹಾಕಿಕೊಳ್ಳಲಾಗಿದೆ. ಇದಕ್ಕಾಗಿ ಪ್ರತಿ ವರ್ಷವೂ 3 ಲಕ್ಷ ಮನೆ ನಿರ್ಮಿಸಲಾಗುತ್ತಿದೆ. ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಹಿಂದುಳಿದ ವರ್ಗದವರಿಗೆ ವಸತಿ ಸೌಕರ್ಯ ಕಲ್ಪಿಸಲು ಸರ್ಕಾರ ಆದ್ಯತೆ ನೀಡಿದೆ.

ರಾಜ್ಯದಲ್ಲಿನ ಬಡವರು ಹಾಗೂ ಸೂರು ಇಲ್ಲದವರಿಗೆ 12 ಲಕ್ಷ ಮನೆಗಳ ಅವಶ್ಯಕತೆ ಇದ್ದು, ಮುಂದಿನ 4 ವರ್ಷಗಳಲ್ಲಿ ಎಲ್ಲಾ ವಸತಿ ಯೋಜನೆಗಳನ್ನು ಅನುಷ್ಠಾನಗೊಳಿಸಿ ಗುಡಿಸಲು ರಹಿತ ರಾಜ್ಯ ನಿರ್ಮಿಸುವ ಇಚ್ಛೆ ಮತ್ತು ಬದ್ಧತೆ ಈ ಸರ್ಕಾರಕ್ಕಿದೆ. ಇದಕ್ಕಾಗಿಯೇ ಪ್ರತಿ ವರ್ಷವೂ ಮೂರು ಲಕ್ಷ ಮನೆಗಳನ್ನು ನಿರ್ಮಿಸಲಾಗುವುದು ಎಂದು ಮುಖ್ಯಮಂತ್ರಿ ಅಧಿಕಾರ ವಹಿಸಿಕೊಂಡ ಮೊದಲ ದಿನವೇ ತಿಳಿಸಿದರು. ಅದರಂತೆ 2013–14ನೇ ಸಾಲಿನಲ್ಲಿ ಹಾಕಿಕೊಂಡಿದ್ದ ಮೂರು ಲಕ್ಷ ಮನೆಗಳನ್ನು ನಿರ್ಮಿಸುವ ಗುರಿ ಹೊಂದಲಾಗಿತ್ತು. ಆದರೆ, ವಾಸ್ತವವಾಗಿ 3.17.485 ಮನೆಗಳನ್ನು ನಿರ್ಮಿಸಲಾಗಿದೆ.

2014–15ನೇ ಸಾಲಿನಲ್ಲಿ 3.70 ಲಕ್ಷ ಮನೆಗಳನ್ನು ನಿರ್ಮಿಸುವ ಗುರಿ ಹಾಕಿಕೊಳ್ಳಲಾಗಿದೆ. ಈಗಾಗಲೇ 2 ಲಕ್ಷ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪೂರ್ಣಗೊಂಡಿದೆ. ಇನ್ನುಳಿದ ನಾಲ್ಕು ವರ್ಷಗಳಲ್ಲಿ ಎಲ್ಲರಿಗೂ ಮನೆಗಳನ್ನು ನಿರ್ಮಿಸಿ ಕೊಡುವ ಮೂಲಕ ಗುಡಿಸಲು ಮುಕ್ತ ರಾಜ್ಯವನ್ನಾಗಿಸಲು ಸರ್ಕಾರ ಪಣತೊಟ್ಟಿದೆ.

**ಸಹಾಯಧನ ಹೆಚ್ಚಳ:** 2013–14ನೇ ಆರ್ಥಿಕ ವರ್ಷದಿಂದ ಮನೆಗಳ ಘಟಕ ಸಹಾಯಧನವನ್ನು 75 ಸಾವಿರ ರೂ.ಗಳಿಂದ 1.20 ಲಕ್ಷ ರೂ.ಗಳಿಗೆ ಹೆಚ್ಚಿಸಲಾಗಿದೆ. ಕಟ್ಟಡ ಸಾಮಗ್ರಿಗಳ ವೆಚ್ಚದ ಏರಿಕೆ ಹಿನ್ನೆಲೆಯಲ್ಲಿ ಸಹಾಯಧನದ ಮೊತ್ತವನ್ನು ಸರ್ಕಾರ ಹೆಚ್ಚಳ ಮಾಡಿದೆ. ಇದು ಬಸವ ವಸತಿ ಯೋಜನೆ, ಅಂಬೇಡ್ಕರ್ ವಸತಿ ಯೋಜನೆ, ವಾಜಪೇಯಿ ನಗರ ವಸತಿ ಯೋಜನೆ ಮತ್ತು ಇಂದಿರಾ ಆವಾಸ್ ಯೋಜನೆಗಳಿಗೆ ಅನ್ವಯವಾಗಲಿದೆ. ಅಲ್ಲದೆ, ಘಟಕದ ವೆಚ್ಚವನ್ನು 1 ಲಕ್ಷ ರೂ.ಗಳಿಂದ 1.50 ಲಕ್ಷ ರೂ.ಗಳಿಗೆ ನಿಗದಿಪಡಿಸಿದೆ.

ಹಾಗೆಯೇ, 2013–14ನೇ ಸಾಲಿಗೆ ಅನ್ವಯವಾಗುವಂತೆ ಇಂದಿರಾ ಆವಾಸ್ ಯೋಜನೆಯನ್ನು ಹೊರತು ಪಡಿಸಿ ಇನ್ನುಳಿದ ವಸತಿ ಯೋಜನೆಗಳಿಗೆ ಅನ್ವಯಿಸಿದಂತೆ ಪ್ರತಿ ಗ್ರಾಮ ಪಂಚಾಯಿತಿಗೆ 20 ಮನೆಗಳು ಮತ್ತು ನಗರ ವಸತಿ ಯೋಜನೆಯಡಿ 20 ಸಾವಿರ ಮನೆಗಳನ್ನು ನಿರ್ಮಿಸುವ ಗುರಿಯನ್ನು ನೀಡಿ, ಅದಕ್ಕೆ ಅನುಗುಣವಾಗಿ ಮನೆ ಸಹಾಯಧನ ಮತ್ತು ಘಟಕ ವೆಚ್ಚವನ್ನು ಸರ್ಕಾರವು ಬಿಡುಗಡೆ ಮಾಡಿದೆ.

